1005 (412) ಶ್ರೀಮತಿ ಭಾಗೀರಥಿ ಪಿ (ಕೊಟ್ಟೂರು) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಕೂಡ್ಲಿಗಿ ತಾಲ್ಲೂಕಿನ ಕೊಟ್ಟೂರು ಪಟ್ಟಣದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ,

ಆ) ಹಾಗಿದ್ದಲ್ಲಿ ಈ ಕಾಲೇಜನ್ನು ಯಾವಾಗ ಪ್ರಾರಂಭ ಮಾಡಲಾಗುವುದು,

ಇ) ಈ ಕಾಲೇಜಿನ ರೂಪುರೇಷೆಗಳನ್ನು ವಿವರಿಸುವುದು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಜಿಲ್ಲಾ ಉಪ ನಿರ್ದೇಶಕರಿಂದ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಶಿಫಾರಸ್ಸಿನೊಂದಿಗೆ ವರದಿಯನ್ನು ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ಕಳುಹಿಸಲಾಗಿದೆ

ಆ) ಅನುದಾನ ಲಭ್ಯತೆ, ಶೈಕ್ಷಣಿಕ ಅಗತ್ಯತೆ, ಇತ್ಯಾದಿಗಳನ್ನು ಪರಿಗಣಿಸಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಲಾಗುತ್ತಿದೆ ಇದೊಂದು ನಿರಂತರವಾದ ಪ್ರಕ್ರಿಯೆಯಾಗಿದೆ

ಇ) ಉದ್ಭವಿಸುವುದಿಲ್ಲ

1006 (1268) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು , ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ರಾಜ್ಯದಲ್ಲಿ 2006-07ನೇ ಸಾಲಿನಲ್ಲಿ ಮಂಜೂರಾದ ಮತ್ತು ಪ್ರಾರಂಭವಾಗಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು,

ಆ) ಪ್ರಾರಂಭವಾಗಿರುವ ಈ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು, ಪ್ರತೀ ಕಾಲೇಜುವಾರು ವಿವರ ನೀಡುವುದು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ರಾಜ್ಯದಲ್ಲಿರುವ 2006-07ನೇ ಸಾಲಿನಲ್ಲಿ ಮಂಜೂರಾದ ಒಟ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ 199 ಇದರಲ್ಲಿ 2006-07ನೇ